ಲಿಂಕ್ ರಸ್ತೆಯ ನಿರ್ಮಾಣಕ್ಕಾಗಿ ಟೆಂಡರನ್ನು 1996-97ರಲ್ಲಿ ಕರೆಯಲಾಗಿದ್ದು ಸುಮಾರು 4 ವರ್ಷಗಳಾಗಿದೆ. ಈ ಕಾಮಗಾರಿಗೆ ರೂ. 10.59 ಕೋಟಿ ಬಿಡುಗಡೆಯಾಗಿದೆ. ಸುಮಾರು 8 ತಿಂಗಳುಗಳಿಂದ ಕೆಲಸ ಸ್ಥಗಿತಗೊಂಡಿದೆ. ಕಾಮಗಾರಿಯನ್ನು ಯಥಾಸ್ಥಿತಿ ಮುಕ್ತಾಯಗೊಳಿಸಿ, ಉಳಿಕೆ ಕೆಲಸಕ್ಕೆ ಅಂದಾಜು ಪಟ್ಟಿಯನ್ನು ತಯಾರಿಸಿ ಕೇಂದ್ರ ಭೂ ಸಾರಿಗೆ ಸಚಿವಾಲಯಕ್ಕೆ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಲಾಗಿದೆ. ಕೇಂದ್ರ ಭೂ ಸಾರಿಗೆ ಸಚಿವಾಲಯದಿಂದ ಆಡಳಿತಾತ್ಮಕ ಮಂಜೂರಾತಿ ದೊರೆತ ನಂತರ ಕಾಮಗಾರಿಯನ್ನು ಕೈಗೊಳ್ಳಲಾಗುವುದು.

4. ಬಂದಿದೆ. ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ರಸ್ತೆ ದುರಸ್ತಿ ಕೆಲಸವನ್ನು ಕೈಗೊಳ್ಳಲಾಗಿದೆ. ಉಳಿಕೆ ಕೆಲಸಕ್ಕೆ ಕೇಂದ್ರ ಭೂ ಸಾರಿಗೆ ಸಚಿವಾಲಯದಿಂದ ಮಂಜೂರಾತಿ ದೊರೆತ ಕೂಡಲೇ ಕಾಮಗಾರಿಯನ್ನು ಕೈಗೊಳ್ಳಲಾಗುವುದು.

ದೊಡ್ಡಬಳ್ಳಾಪುರ ತಾಲ್ಲೂಕಿನ ಪ್ರವಾಸೋದ್ಯಮ ಇಲಾಖಾವತಿಯಿಂದ ರಸ್ತೆಗಳ ದುರಸ್ತಿ.

574(735)

ಶ್ರೀ ಕೃಷ್ಣಪ್ಪ .ಎ.(ದೊಡ್ಡಬಳ್ಳಾಪುರ): ಮಾನ್ಯ ಪ್ರವಾಸೋದ್ಯಮ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನ ಪ್ರಸಿದ್ಧ ಕ್ಷೇತ್ರವಾದ ಎಸ್.ಎಸ್.ಘಾಟಿ ಮತ್ತು ಗಡಿಯಲ್ಲಿರುವ ನಂದಿದುರ್ಗಕ್ಕೆ ದೊಡ್ಡಬಳ್ಳಾಪುರದಿಂದ ಸಂಪರ್ಕ ಕಲ್ಪಿಸುವ ರಸ್ತೆಗಳು ಪೂರ್ಣ ಹದಗೆಟ್ಟಿದ್ದು ಪ್ರವಾಸೋದ್ಯಮ ಇಲಾಖಾ ವತಿಯಿಂದ ರಸ್ತೆಗಳನ್ನು ಅಗಲಗೊಳಿಸಿ ಸುಸ್ಥಿತಿಯಲ್ಲಿಡಲು ಕ್ರಮ ಕೈಗೊಳ್ಳಲಾಗಿದೆಯೇ; ಹಾಗಾದಲ್ಲಿ, ಯಾವಾಗ ಈ ಕೆಲಸವನ್ನು ಪ್ರಾರಂಭಿಸಲಾಗುವುದು?

ಶ್ರೀ ಆರ್.ರೋಷನ್ ಬೇಗ್ (ಪ್ರವಾಸೋದ್ಯಮ ಮತ್ತು ಹಜ್ ಸಚಿವರು):

ಅ) ರಸ್ತೆಗಳನ್ನು ಅಗಲಗೊಳಿಸಿ ಸುಸ್ಥಿತಿಯಲ್ಲಿಡುವುದು ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ.

ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಅರಣ್ಯ ಇಲಾಖೆಯ ಜಮೀನನ್ನು ಒತ್ತುವರಿ

ಮಾಡಿರುವ ಬಗ್ಗೆ.

575(732)

ಶ್ರೀ ವಿ.ಕೃಷ್ಣಪ್ಪ(ದೊಡ್ಡಬಳ್ಳಾಪುರ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು: ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಅರಣ್ಯ ಇಲಾಖೆಗೆ ಸೇರಿದ ಭೂಮಿಯನ್ನು ಶ್ರೀಮಂತರುಗಳೇ ಅತಿಕ್ರಮಿಸಿ ಕಬಳಿಸಿರುವುದು ಮತ್ತು ಅರಣ್ಯ ಇಲಾಖೆಯವರು ಕಾಂಪೌಂಡ್ ನಿರ್ಮಾಣ ಮಾಡುವುದರಲ್ಲಿ ನಡೆದಿರುವ ಅವ್ಯವಹಾರಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅರಣ್ಯ ಇಲಾಖೆಯಲ್ಲಿ ಜಿಲ್ಲಾ ಪಂಚಾಯತ್ ವತಿಯಿಂದ ಸಸಿ ತಯಾರಿಕೆಯಲ್ಲಿ ನಡೆದಿರುವ ಅವ್ಯವಹಾರಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಇದರ ಪೂರ್ಣ ತನಿಖೆಯನ್ನು ಉನ್ನತ ಅಧಿಕಾರಿಯೊಬ್ಬರಿಂದ ನಡೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ.

ಶ್ರೀ ಕೆ.ಹೆಚ್.ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಇಲ್ಲ

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

ನಬಾರ್ಡ್‌ವತಿಯಿಂದ ಪಡೆದಿರುವ ಸಾಲದ ವಿವರ.

576(117)

ಶ್ರೀ ಕೃಷ್ಣಮೂರ್ತಿ ಕೆ.ಎಂ.(ಕಡೂರು): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ನಬಾರ್ಡ್ ವತಿಯಿಂದ ಕರ್ನಾಟಕ ರಾಜ್ಯಕ್ಕೆ ಬಿಡುಗಡೆಯಾಗಿರುವ ಹಣವೆಷ್ಟು: ಈ ಸಾಲದ ಹಣದಲ್ಲಿ 2000-2001ನೇ ಸಾಲಿಗೆ ಪ್ರತಿಯೊಂದು ಜಿಲ್ಲೆಯ ಕಾಮಗಾರಿಗಳಾದ ರಸ್ತೆ ಸೇತುವೆ ಮುಂತಾದವುಗಳಿಗೆ (1999-2000) ಬಿಡುಗಡೆ